ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಗುರುವಾರ, ದಿನಾಂಕ: 18ನೇ ಜುಲೈ, 2019

ನಾಗಮಂಗಲ ತಾಲ್ಲೂಕಿನಲ್ಲಿ ನಡೆಯುತ್ತಿರುವ ಅಕ್ರಮ ಗಣಿಗಾರಿಕೆಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

287 (554) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ಹೊನಕೆರೆ ಹೋಬಳಿ ಗಂಗಸಮುದ್ರ ಎಲ್ಲೆ ಸರ್ವೆ ನಂ. 143 ರಲ್ಲಿ ಮತ್ತು ಶ್ಯಾನುಬೋಗನಹಳ್ಳಿ ಗ್ರಾಮದ ಎಲ್ಲೆಯಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಗ್ರಾಮಗಳ ಸರ್ವೆ ನಂಬರ್ಗಳಲ್ಲಿ ಅಕ್ರಮ ಗಣಿಗಾರಿಕೆ ನಡೆಸುತ್ತಿರುವ ಮಾಲೀಕರ ಹೆಸರು ಮತ್ತು ಅವರು ನಡೆಸುತ್ತಿರುವ ಗಣಿಗಾರಿಕೆ ಜಮೀನಿನ ವಿಸ್ತೀರ್ಣ ಎಷ್ಟು ; ಇದರಲ್ಲಿ ಅಕ್ರಮವಾಗಿ ಸರ್ಕಾರದ ಎಷ್ಟು ಭಾಗ ಬಳಸಿಕೊಂಡಿದ್ದಾರೆ ; ಅಕ್ರಮವಾಗಿ ಗಣಿಗಾರಿಕೆ ನಡೆಯುತ್ತಿದ್ದರೂ ಕ್ರಮಕೈಗೊಳ್ಳದೆ ಇರುವುದಕ್ಕೆ ಕಾರಣ ಮತ್ತು ಕೈಗೊಂಡಿರುವ ಕ್ರಮಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ಪ್ರತಿ ದಿನ ರಾತ್ರಿ ಸಮಯ ಅಕ್ರಮವಾಗಿ ಗಣಿಗಾರಿಕೆಗೆ ಬಳಸುವ ಸಿಡಿಮದ್ದುಗಳಿಂದ ಸುತ್ತ-ಮುತ್ತ ವಾಸಿಸುವ ಗ್ರಾಮಗಳ ಮನೆಗಳು ಬಿರುಕುಗೊಂಡಿದ್ದು ಈ ಬಗ್ಗೆ ಗ್ರಾಮಸ್ಥರುಗಳು ನೀಡಿರುವ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)